# ಕನ್ನಡ ಸಾಹಿತ್ಯ ಚರಿತ್ರೆ

Dr. Sowmya M
Asst. Professor
Department of Kannada(UG)
JSS College of Arts Commerce and Science
Ooty Road Mysore-25

# **ಕನ್ನಡ ಸಾಹಿತ್ಯ:**

ಕನ್ನಡ ಬರವಣಿಗೆಯ ಪ್ರಪ್ರಥಮ ಉದಾಹರಣೆ ದೊರಕಿರುವುದು ತಾಳಗುಂದದ ಸಿಂಹಕಟಾಂಜನ ಶಾಸನ ದಲ್ಲಿ (ಸು. ಕ್ರಿ.ಶ೩೭೦ ರಿಂದ೪೫೦). ಪ್ರಸಿದ್ಧವಾದ ಬಾದಾಮಿ ಶಾಸನಗಳು ಪುರಾತನ ಕನ್ನಡ ಬರವಣಿಗೆಯ ಮತ್ತಷ್ಟು ಉದಾಹರಣೆಗಳನ್ನು ನೀಡುತ್ತವೆ. ಉಪಲಬ್ಧವಾಗಿರುವ ಪ್ರಥಮ ಕನ್ನಡ ಪುಸ್ತಕವೆಂದರೆ ೯ ನೇ ಶತಮಾನದ ಅಮೋಘವರ್ಷ ನೃಪತುಂಗನ [ಕವಿರಾಜಮಾರ್ಗ ನೃಪತುಂಗನ ಆಸ್ಥಾನದ ಕವಿಯಾಗಿದ್ದ ಶ್ರೀವಿಜಯನ ಈ ಪುಸ್ತಕ ಕನ್ನಡ ಕಾವ್ಯ, ಕನ್ನಡ ನಾಡು, ಮತ್ತು ಕನ್ನಡಿಗರ ಬಗ್ಗೆ ಬರೆಯಲ್ಪಟ್ಟ ಒಟ್ಟಾರೆ ಸಾರಾಂಶವೆನ್ನಬಹುದು.
ಇದಕ್ಕೆ ಹಿಂದೆ ಬರೆಯಲ್ಪಟ್ಟ ಕೆಲವು ಕನ್ನಡ ಪುಸ್ತಕಗಳ ಉಲ್ಲೇಖ ಈ ಪುಸ್ತಕದಲ್ಲಿ ಬಂದಿರುವ ಆಧಾರದ ಮೇಲೆ ಕನ್ನಡ ಸಾಹಿತ್ಯದ ಉಗಮ ಸುಮಾರು ಕ್ರಿ.ಶ. ೬-೭ನೇ ಶತಮಾನಗಳಲ್ಲಿ ಆದದ್ದಿರಬಹುದು. ಆದರೆ ಕವಿರಾಜಮಾರ್ಗದ ಹಿಂದಿನ ಯಾವ ಕೃತಿಗಳೂ ಇದುವರೆಗೆ ದೊರಕಿಲ್ಲ. ಕನ್ನಡ ಸಾಹಿತ್ಯದ ಚರಿತ್ರೆಯನ್ನು ಮೂರು ಘಟ್ಟಗಳಾಗಿ ವಿಂಗಡಿಸಬಹುದು: **ಹಳೆಗನ್ನಡ**, **ನಡುಗನ್ನಡ** ಹಾಗೂ **ಆಧುನಿಕ ಕನ್ನಡ.**

**ಹಳೆಗನ್ನಡ:**

ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಹತ್ತನೇ ಶತಮಾನದಿಂದ ಸುಮಾರು ಹನ್ನೆರಡನೇ ಶತಮಾನದ ವರೆಗಿನ ಕಾಲಘಟ್ಟವನ್ನು **ಹಳೆಗನ್ನಡ** ಎಂದು ಗುರುತಿಸಬಹುದು. ಈ ಕಾಲದ ಸಾಹಿತ್ಯ ಮುಖ್ಯವಾಗಿ ಜೈನ ಧರ್ಮವನ್ನು ಅವಲಂಬಿಸಿದೆ. ಕನ್ನಡ ಚರಿತ್ರೆಯ ಈ ಘಟ್ಟಕ್ಕೆ **ಆದಿ-ಕಾವ್ಯ** ಎಂದೂ ಸಹ ಕರೆಯಬಹುದು. ಈ ಕಾಲದ ಅತಿ ಪ್ರಸಿದ್ಧ ಕವಿಯೆಂದರೆ ಪಂಪ (ಕ್ರಿ.ಶ. ೯೦೨-೯೭೫).

ಪಂಪನ ವಿಕ್ರಮಾರ್ಜುನ ವಿಜಯ ಅಥವಾ **ಪಂಪ ಭಾರತ** ಇಂದಿಗೂ ಮೇರು ಕೃತಿಯೆಂದು ಪರಿಗಣಿತವಾಗಿದೆ. ಪಂಪ ಭಾರತ ಮತ್ತು ತನ್ನ ಇನ್ನೊಂದು ಮುಖ್ಯಕೃತಿಯಾದ **ಆದಿಪುರಾಣ**ದ ಮೂಲಕ ಪಂಪ ಕನ್ನಡ ಕಾವ್ಯಪರಂಪರೆಯ ದಿಗ್ಗಜರಲ್ಲಿ ಒಬ್ಬನಾಗಿದ್ದಾನೆ. ಪಂಪ ಭಾರತ ಸಂಸ್ಕೃತ ಮಹಾಭಾರತದ ಕನ್ನಡ ರೂಪಾಂತರ. ತನ್ನ ಮಾನವತಾವಾದ ಹಾಗೂ ಗಂಭೀರ ಲೇಖನಶೈಲಿಯ ಮೂಲಕ ಕನ್ನಡದ ಅತ್ಯಂತ ಪ್ರಭಾವಶಾಲಿ ಲೇಖಕರಲ್ಲಿ ಒಬ್ಬನಾಗಿದ್ದಾನೆ.' ಮಾನವ ಕುಲ ತಾನೊಂದೇ ವಲಂ' ಎಂದು ವಿಶ್ವಮಾನವ ತತ್ವವನ್ನು ಸಾರಿದ ಜಗದ ಕವಿ ಪಂಪ.

ಇದೇ ಕಾಲದ ಇನ್ನೊಬ್ಬ ಪ್ರಮುಖ ಲೇಖಕನೆಂದರೆ **ಶಾಂತಿನಾಥ ಪುರಾಣ**ವನ್ನು ರಚಿಸಿದ ಪೊನ್ನ (೯೩೯-೯೬೬). ಈ ಕಾಲದ ಮತ್ತೊಬ್ಬ ಹೆಸರಾಂತ ಕವಿ **ರನ್ನ** (೯೪೯-?). ರನ್ನನ ಪ್ರಮುಖ ಕೃತಿಗಳು ಜೈನ ಧರ್ಮೀಯವಾದ **ಅಜಿತ ತೀರ್ಥಂಕರ ಪುರಾಣ** ಮತ್ತು ಗದಾಯುದ್ಧಂ ಅಥವಾ **ಸಾಹಸಭೀಮ ವಿಜಯ**.

ಇದು ಇಡೀ ಮಹಾಭಾರತದ ಒಂದು ಸಿಂಹಾವಲೋಕನ ದೃಷ್ಟಿ. ಮಹಾಭಾರತ ಯುದ್ಧದ ಕೊನೆಯ ದಿನದಲ್ಲಿ ಸ್ಥಿತವಾಗಿದ್ದರೂ ಸಿಂಹಾವಲೋಕನ ಕ್ರಮದಲ್ಲಿ ಇಡಿಯ ಮಹಾಭಾರತವನ್ನು ಪರಿಶೀಲಿಸುತ್ತದೆ. ಛಂದಸ್ಸಿನ ದೃಷ್ಟಿಯಿಂದ ಈ ಕಾಲದ ಕಾವ್ಯ ಚಂಪೂ ಶೈಲಿಯಲ್ಲಿದೆ (ಒಂದು ರೀತಿಯ ಗದ್ಯ ಮಿಶ್ರಿತ ಪದ್ಯ)

**ನಡುಗನ್ನಡ:**

ನಡುಗನ್ನಡ ಸಾಹಿತ್ಯದಲ್ಲಿ ಅನೇಕ ಹೊಸ ಸಾಹಿತ್ಯ ಪ್ರಕಾರಗಳು ಬೆಳಕಿಗೆ ಬಂದವು. ಇವುಗಳಲ್ಲಿ ಮುಖ್ಯವಾದವು ರಗಳೆ, ಸಾಂಗತ್ಯ ಮತ್ತು ದೇಸಿ. ಈ ಕಾಲದ ಸಾಹಿತ್ಯ ಜೈನ, ಹಿಂದೂ ಹಾಗೂ ಜಾತ್ಯತೀತ ಬೋಧನೆಗಳ ಮೇಲೆ ಆಧಾರಿತವಾಗಿದೆ. ಈ ಘಟ್ಟದ ಪ್ರಮುಖ ಲೇಖಕರಲ್ಲಿ ಇಬ್ಬರೆಂದರೆ ಹರಿಹರ ಮತ್ತು ರಾಘವಾಂಕ. ಇಬ್ಬರೂ ತಮ್ಮದೇ ಶೈಲಿಯಲ್ಲಿ ಕನ್ನಡ ಸಾಹಿತ್ಯದ ದಾರಿಯನ್ನು ಬೆಳಗಿದವರು.

ಹರಿಹರ ರಗಳೆ ಸಾಹಿತ್ಯವನ್ನು ಬಳಕೆಗೆ ತಂದನು, ತನ್ನ ಶೈವ ಮತ್ತು ವೀರಶೈವ ಕೃತಿಗಳ ಮೂಲಕ. ರಾಘವಾಂಕ ತನ್ನ ಆರು ಕೃತಿಗಳ ಮೂಲಕ ಷಟ್ಪದಿ ಛಂದಸ್ಸನ್ನು ಜನಪ್ರಿಯಗೊಳಿಸಿದನು. ಅವನ ಮುಖ್ಯ ಕೃತಿ **ಹರಿಶ್ಚಂದ್ರ ಕಾವ್ಯ**, ಪೌರಾಣಿಕ ಪಾತ್ರವಾದ ಹರಿಶ್ಚಂದ್ರನ ಜೀವನವನ್ನು ಕುರಿತದ್ದು. ಈ ಕೃತಿ ಸಹ ತನ್ನ ತೀವ್ರವಾದ ಮಾನವತಾವಾದಕ್ಕೆ ಪ್ರಸಿದ್ಧವಾಗಿದೆ.

ಇದೇ ಕಾಲದ ಇನ್ನೊಬ್ಬ ಪ್ರಸಿದ್ಧ ಜೈನ ಕವಿ ಜನ್ನ. ತನ್ನ ಕೃತಿಗಳಾದ **ಯಶೋಧರ ಚರಿತೆ** ಮತ್ತು **ಅನಂಥನಾಥ ಪುರಾಣ**ಗಳ ಮೂಲಕ ಜೈನ ಸಂಪ್ರದಾಯದ ಬಗ್ಗೆ ಬರೆದನು. ಇದೇ ಕಾಲದ ಕನ್ನಡ ವ್ಯಾಕರಣದ ಬಗೆಗಿನ ಮುಖ್ಯ ಕೃತಿ ಕೇಶಿರಾಜನ **ಶಬ್ದಮಣಿದರ್ಪಣ**.

# ಆಧುನಿಕ ಕನ್ನಡ- ಕನ್ನಡದ ನವೋದಯ

ನವೋದಯ ಎಂದರೆ **ಹೊಸ ಹುಟ್ಟು/ಹೊಸದು**. ಬ್ರಿಟಿಷ್ ಆಳ್ವಿಕೆಯ ಪ್ರಾರಂಭಿಕ ಹಂತಗಳಲ್ಲಿ ಹೆಚ್ಚು ಬೆಳಕು ಕಾಣದೆ ಇದ್ದ ಕನ್ನಡ ಸಾಹಿತ್ಯ, ೧೯ನೇ ಶತಮಾನದ ಕೊನೆಗೆ ಹಾಗು ಇಪ್ಪತ್ತನೆ ಶತಮಾನದ ಆರಂಭದಲ್ಲಿ ಹೊಸ ಹುಟ್ಟು ಪಡೆಯಿತು. ಆಧುನಿಕ ಕನ್ನಡ ಕಾವ್ಯದ ಬೆಳವಣಿಗೆಗೆ ಕಾರಣವಾಯಿತು. ಈ ಹಂತದಲ್ಲಿ ಬಿ.ಎಂ.ಶ್ರೀ, ಕುವೆಂಪು, ಬೇಂದ್ರೆ, ಶಿವರಾಮ ಕಾರಂತ ಮೊದಲಾದ ಶ್ರೇಷ್ಠ ಲೇಖಕರು ಬೆಳಕಿಗೆ ಬಂದರು.

ಈ ಕಾಲದ ಸಾಹಿತ್ಯ ಪ್ರಕಾರಗಳು ರೊಮ್ಯಾಂಟಿಕ್ ಇಂಗ್ಲಿಷ್ ಕಾವ್ಯ ಮತ್ತು ಗ್ರೀಕ್ ರುದ್ರನಾಟಕಗಳಿಂದ ಪ್ರಭಾವಿತವಾಯಿತು. ಈ ಘಟ್ಟದ ಬೆಳವಣಿಗೆಯನ್ನು ತಂದವರು ಬಿ.ಎಂ.ಶ್ರೀ, ತಮ್ಮ **ಇಂಗ್ಲಿಷ್ ಗೀತಗಳ** ಪುಸ್ತಕ ದೊಂದಿಗೆ. ಅನೇಕ ಸುಶಿಕ್ಷಿತ ಕನ್ನಡಿಗರು, ಮುಖ್ಯವಾಗಿ ಶಿಕ್ಷಕ ವೃತ್ತಿಯಲ್ಲಿದ್ದವರು, ತಮ್ಮ ಮಾತೃಭಾಷೆಯಲ್ಲಿ ಬರೆಯುವುದರ ಮಹತ್ವವನ್ನು ಕಂಡು ಕೊಂಡು ಕನ್ನಡ ಸಾಹಿತ್ಯಕ್ಕೆ ಪ್ರೇರಣೆಯನ್ನೊದಗಿಸಿದರು.

ಇದಕ್ಕೆ ಉದಾಹರಣೆಯಾಗಿ ಕುವೆಂಪು - ತಮ್ಮ ಒಬ್ಬ ಶಿಕ್ಷಕರಿಂದ (ಬ್ರಿಟಿಷ್ ಮೂಲದವರು) ಕನ್ನಡದಲ್ಲಿ ಬರೆಯುವುದರ ಮಹತ್ವವನ್ನು ಕಂಡುಕೊಂಡು ಮುಂದೆ **ರಾಷ್ಟ್ರಕವಿ** ಬಿರುದಿಗೆ ಪಾತ್ರರಾದರು. ಅವರ ಪ್ರಕೃತಿಪ್ರೇಮ, ಮಾನವನ ಉನ್ನತಿಯಲ್ಲಿ ನಂಬಿಕೆ ಮತ್ತು ಪ್ರಕೃತಿ ಮತ್ತು ದೇವರ ಸಮ್ಮಿಶ್ರಣವನ್ನು ಕಾಣುವ ಅವರ ಮನಸ್ಸು ಅವರನ್ನು ಕನ್ನಡದ ಉಚ್ಚ ಕವಿಗಳಲ್ಲಿ ಒಬ್ಬರನ್ನಾಗಿ ಮಾಡಿವೆ. ಅವರ ಅತಿ ಪ್ರಸಿದ್ಧ ಕಾವ್ಯಕೃತಿ **ಶ್ರೀ ರಾಮಾಯಣ ದರ್ಶನಂ**.

ಇದಕ್ಕೆ ಉದಾಹರಣೆಯಾಗಿ ನಿಂತಿರುವ ಮತ್ತೊಬ್ಬ ಲೇಖಕರೆಂದರೆ ಶಿವರಾಮ ಕಾರಂತ - ಅತ್ಯಂತ ಬುದ್ಧಿಮತ್ತೆಯ, ಆಳವಾದ ಆದರ್ಶಗಳುಳ್ಳ ವ್ಯಕ್ತಿತ್ವ, ಹಾಗೂ ಅಷ್ಟೇ ಆಳವಾದ ಸಾಮಾಜಿಕ ಕಳಕಳಿಯಿದ್ದ ಲೇಖಕರು. ಅವರ ಶಕ್ತಿಶಾಲಿ ಸಾಮಾಜಿಕ ಕಾದಂಬರಿಗಳಲ್ಲಿ ಪ್ರಸಿದ್ಧವಾದವು-ಚೋಮನ ದುಡಿ, ಬೆಟ್ಟದ ಜೀವ, ಮೈಮನಗಳ ಸುಳಿಯಲ್ಲಿ, **ಮರಳಿ ಮಣ್ಣಿಗೆ** ಮತ್ತು **ಮೂಕಜ್ಜಿಯ ಕನಸುಗಳು** ಮೊದಲಾದುವು.